**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ ಹೇಮಲತಾ ನಾಯಕ್ ಇವರ ಗಮನ ಸೆಳೆಯುವ ಸೂಚನೆ ನಿಯಮ 72 ಕ್ಕೆ ಉತ್ತರ.**

**ಸೂಚನೆ:**

ರಾಜ್ಯದಲ್ಲಿ ತೀವ್ರ ಸಂಕಷ್ಟದಲ್ಲಿರುವ ಅಸ್ಪೃಶ್ಯ ಅಲೆಮಾರಿ "ಮಾದಿಗ ದಾಸರಿ" (ಮಾದಿಗ ದಾಸು) ಸಮುದಾಯದ ಹೆಸರು SC ಜಾತಿ ಪಟ್ಟಿಯಲ್ಲಿ ನೊಂದಾಯಿಸುವ ಸಲುವಾಗಿ ಈಗಾಗಲೇ ಕುಲ ಶಾಸ್ತ್ರೀಯ ಅಧ್ಯಯನದ ವರದಿ ಲಭ್ಯವಿದ್ದರೂ ಕೂಡ ಹಾಗೂ ಸ್ವಾತಂತ್ರ್ಯ ನಂತರವು ಸಾಮಾಜಿಕ ನ್ಯಾಯದಿಂದ ವಂಚಿತವಾಗಿರುವ ಈಗಲೂ ಜಾತಿ ಪ್ರಮಾಣ ಪತ್ರ ಪಡೆಯಲು ತೊಂದರೆ ಅನುಭವಿಸುತ್ತಿರುವ, ಅತೀ ಹಿಂದುಳಿದ ಭೂ ರಹಿತ ಅಲೆಮಾರಿ "ಮಾದಿಗ ದಾಸರಿ" ಸಮುದಾಯದ ಮಕ್ಕಳ ವಿದ್ಯಾಭ್ಯಾಸ, ಉದ್ಯೋಗ, ಸರ್ಕಾರಿ ಸೌಲಭ್ಯ ವನ್ನು ಈ ಸಮುದಾಯಕ್ಕೆ ಯಾವ ರೀತಿ ಸಾಮಾಜಿಕ ನ್ಯಾಯ ಸರಕಾರ ಒದಗಿಸಿದೆ. ಈ ಕುರಿತಾಗಿ ಕೇಂದ್ರ ಸರ್ಕಾರಕ್ಕೆ ಸೂಕ್ತ ಪ್ರಸ್ತಾವನೆ ಸಲ್ಲಿಸುವ ಪ್ರಕ್ರಿಯೆ ವಿಳಂಬವಾಗಿರುವುದೇಕೆ. ಯಾವಾಗ ಕೇಂದ್ರ ಸರಕಾರಕ್ಕೆ ಸೂಕ್ತ ಶಿಫಾರಸ್ಸು ಪ್ರಸ್ತಾವನೆ ಸಲ್ಲಿಸಲಾಗುವುದು. ಪರಿಶೀಲಿಸಲು ತೆಗೆದುಕೊಳ್ಳುವ ಕಾಲಾವಧಿ ಎಷ್ಟು, ಈ ವಿಷಯದ ಬಗ್ಗೆ ಸರಕಾರ ಕೈಗೊಳ್ಳಬೇಕಾದ ಕ್ರಮಗಳ ಕುರಿತು ನಿಯಮ 72 ರ ಮೇರೆಗೆ ವಿಷಯ ಪ್ರಸ್ತಾಪಿಸಿ ಸರ್ಕಾರದ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:**

"ಮಾದಿಗ ದಾಸರಿ" ಸಮುದಾಯದ ಕುಲ ಶಾಸ್ತ್ರೀಯ ಅಧ್ಯಯನದ ವರದಿ ಬಂದಿದೆ. ಪ್ರಸ್ತುತ ಸರ್ಕಾರದ ಪರಿಶೀಲನೆಯಲ್ಲಿದೆ. ಸಧ್ಯದಲ್ಲಿಯೇ ಈ ಬಗ್ಗೆ ತೀರ್ಮಾನ ತೆಗೆದುಕೊಳ್ಳಲಾಗುವುದು.

ಭಾರತ ಸಂವಿಧಾನದ ಅನುಚ್ಛೇದ 341(2) ರ ಪ್ರಕಾರ ಯಾವುದೇ ಜಾತಿ ಅಥವಾ ಉಪಜಾತಿಯನ್ನು ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ಸೇರಿಸುವ/ಬದಲಾಯಿಸುವ ಅಧಿಕಾರ ಭಾರತದ ಸಂಸತ್‌ಗೆ ಮಾತ್ರ ಇರುತ್ತದೆ. ರಾಜ್ಯ ಸರ್ಕಾರಕ್ಕೆ ಈ ರೀತಿಯ ಅಧಿಕಾರ ಇರುವುದಿಲ್ಲ. ಸದರಿ ಸಮುದಾಯವು ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ಇಲ್ಲದೇ ಇರುವುದರಿಂದ ಸರ್ಕಾರಿ ಸೌಲಭ್ಯ ಪಡೆಯಲು ಸಾಧ್ಯವಿರುವುದಿಲ್ಲ.

**ಕಡತ ಸಂಖ್ಯೆ: SWD 446 SLP 2025**

(ಡಾ. ಹೆಚ್.ಸಿ ಮಹದೇವಪ್ಪ),
ಸಮಾಜ ಕಲ್ಯಾಣ ಸಚಿವರು.